ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ ೨೫ – ಕನ್ನಡ ಮತ್ತು ಸಂಸ್ಕೃತಿ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩-೨೦೦೮ ರಂದು ಕೊನೆಗೊಳುವ ಆರ್ಥಿಕ ವರ್ಷದಲ್ಲಿ "ಕನ್ನಡ ಮತ್ತು ಸಂಸ್ಕೃತಿ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ೧೨,೭೦೨.೧೯ ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ ೧,೧೩೦.೦೦ ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ ೦೯–ಸಹಕಾರ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩-೨೦೦೮ ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲಿ "ಸಹಕಾರ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ೯೦,೩೯೬,೭೦ ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ ೧,೫೯೭.೦೦ ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ,(ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕ, ೨೦೦೭

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್.ಯಡಿಯೂರಪ್ಪ (ಹಣಕಾಸು ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, ೨೦೦೭ರ ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ ;

"೨೦೦೭ ರ ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಗಯಿತು

ಶ್ರೀ ಬಿ.ಎಸ್. ಯಡಿಯೂರಪ್ಪ : ಮಾನ್ಯ ಅಧ್ಯಕ್ಷರೆ,

೨೦೦೭ ರ ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಗೊಂದಲ)

ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕ, ೨೦೦೭

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್. ಯಡಿಯೂರಪ್ಪ (ಹಣಕಾಸು ಮಂತ್ರಿಗಳು) : ಮಾನ್ಯ ಅಧ್ಯಕರೆ, ೨೦೦೭ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರಿರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ ;

"೨೦೦೭ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಲಸು ಅನುಮತಿ ನೀಡುವುದು."